# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1580 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)<br>( ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 19-12-2025 |
| ಉತ್ತರಿಸುವವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಾವತಿಸಲಾಗಿದೆಯೇ | 2025-26ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕೇಂದ್ರ ಪುರಸ್ಕೃತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಕ್ರಮವಾಗಿ 106514 ಮತ್ತು 174666 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಕ್ರಮ ವಹಿಸಲಾಗಿದೆ. |
| ಆ) | ಪಾವತಿಸಿದ್ದಲ್ಲಿ ಜಾತಿವಾರು ಮತ್ತು ಪ್ರವರ್ಗವಾರು ಮಾಹಿತಿಯನ್ನು ನೀಡುವುದು ಪಾವತಿಸದೇ ಇದ್ದಲ್ಲಿ ಕಾರಣವೇನು; | ಪ್ರಸ್ತುತ, ಕೇಂದ್ರ ಪುರಸ್ಕೃತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಕ್ರಮವಾಗಿ 106514 ಮತ್ತು 174666 ವಿದ್ಯಾರ್ಥಿಗಳಿಗೆ ಮಾಡಲು ವಿದ್ಯಾರ್ಥಿವೇತನ ಪಾವತಿ ಮಾಡಲು ಖಜಾನೆಗೆ ಬಿಲ್‌ಗಳನ್ನು ಸಲ್ಲಿಸಲಾಗಿರುತ್ತದೆ ಜಾತಿವಾರು ಮತ್ತು ಪ್ರವರ್ಗವಾರು ಮಾಹಿತಿ ಲಭ್ಯವಿರುವುದಿಲ್ಲ. ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಅರ್ಜಿ ಸಲ್ಲಿಸಲು ದಿನಾಂಕ: 20-12-2025 ರವರೆಗೆ ವಿಸ್ತರಿಸಲಾಗಿರುತ್ತದೆ. ಅರ್ಜಿ ಸ್ವೀಕೃತಿ ಮುಕ್ತಾಯವಾದ ನಂತರ ಪಾವತಿ ಮಾಡಲು ಕ್ರಮವಹಿಸಲಾಗುವುದು. |
| ಇ) | ಎಲ್ಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅತೀ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಎಷ್ಟು ಪ್ರಕರಣಗಳು ಬಂದಿರುತ್ತವೆ ಈ ರೀತಿಯ ಪ್ರಕರಣಗಳ ಬಗ್ಗೆ ಸರ್ಕಾರದ ನಿಲುವುಗಳೇನು ಹಾಗೂ ಕೈಗೊಂಡ ಕ್ರಮಗಳೇನು | 2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಡಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ:20.12.2025ಕ್ಕೆ ನಿಗದಿಪಡಿಸಲಾಗಿದ್ದು, ಅರ್ಹ ಅರ್ಜಿಗಳ ಪರಿಶೀಲನೆ ಮತ್ತು ಮಂಜೂರಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಅರ್ಹ ಅರ್ಜಿಗಳಿಗೆ ಅನುದಾನದ ಲಭ್ಯತೆಯನುಸಾರ ವಿದ್ಯಾರ್ಥಿವೇತನ ಪಾವತಿಸಲು ಕ್ರಮವಹಿಸಲಾಗುವುದು. |

...2..

| | | |
|---|---|---|
| ಈ) | ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಿದ್ದಲ್ಲಿ ಎಲ್ಲರಿಗೂ ವಿದ್ಯಾರ್ಥಿ ವೇತನ ನೀಡದಿರಲು ಕಾರಣಗಳೇನು | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳು ಅನುದಾನದ ಮಿತಿಗೆ ಒಳಪಟ್ಟಿದ್ದು, ಆರ್ಥಿಕ ವರ್ಷದಲ್ಲಿ ಬಿಡುಗಡೆಯಾಗುವ ಅನುದಾನದಲ್ಲಿ ಅರ್ಜಿ ಸಲ್ಲಿಸಿದ ಅರ್ಹ ವಿದ್ಯಾರ್ಥಿಗಳಿಗೆ ಅರ್ಹತೆ ಮತ್ತು ಅನುದಾನದ ಲಭ್ಯತೆಯನುಸಾರ ವಿದ್ಯಾರ್ಥಿವೇತನ ಪಾವತಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಹಿಂವಕ 1267 ಬಿಎಂಎಸ್ 2025

(ಶಿವರಾಜ.ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.